ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಬುಧವಾರ, ದಿನಾಂಕ : 03 ನೇ ಫೆಬ್ರುವರಿ, 2021

ಕೊಡಗು ಜಿಲ್ಲೆಯಲ್ಲಿ ಸರ್ಕಾರಿ ಜಾಗ ಮಂಜೂರಾತಿಗಾಗಿ ಮಾಜಿ ಸೈನಿಕರು ಸಲ್ಲಿಸಿರುವ ಅರ್ಜಿಗಳು ಬಾಕಿ ಇರುವ ಕುರಿತು

ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :-

310 (341) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೊಡಗು ಜಿಲ್ಲೆಯಲ್ಲಿ ಸರ್ಕಾರಿ ಜಾಗ ಮಂಜೂರಾತಿಗಾಗಿ ಮಾಜಿ ಸೈನಿಕರು ಸಲ್ಲಿಸಿರುವ ಹಲವು ಅರ್ಜಿಗಳು ದೀರ್ಘ ಕಾಲದಿಂದ ಬಾಕಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಇದುವರೆಗೂ ಸಲ್ಲಿಕೆಯಾದ ಅರ್ಜಿಗಳು ಎಷ್ಟು; ಎಷ್ಟು ವಿಲೇವಾರಿ ಆಗಿವೆ; ಎಷ್ಟು ವಿಲೇವಾರಿಯಾಗದೇ ಬಾಕಿ ಉಳಿದಿವೆ;

(ಇ) ವಿಲೇವಾರಿಯಾಗದೇ ಅರ್ಜಿಗಳು ಈ ರೀತಿ ದೀರ್ಘ ಕಾಲದಿಂದ ಬಾಕಿ ಉಳಿದಿರಲು ಕಾರಣಗಳೇನು; (ಪ್ರಕರಣವಾರು ವಿವರಗಳನ್ನು ನೀಡುವುದು)

(ಈ) ಯಾವ ಕಾಲಮಿತಿಯೊಳಗೆ ದೀರ್ಘ ಕಾಲದಿಂದ ಬಾಕಿ ಉಳಿದಿರುವ ಈ ಎಲ್ಲಾ ಅರ್ಜಿಗಳನ್ನು ವಿಲೇವಾರಿ ಮಾಡಿ, ದೇಶ ಸೇವೆಗೆ ತಮ್ಮ ಜೀವನವನ್ನೇ ಮುಡುಪಾಗಿಟ್ಟ ಮಾಜಿ ಸೈನಿಕರಿಗೆ ನ್ಯಾಯ ಒದಗಿಸಿಕೊಡಲಾಗುವುದು?